ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1154
2. ಮಾನ್ಯ ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್
3. ಉತ್ತರಿಸಬೇಕಾದ ದಿನಾಂಕ : 17.03.2020
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ	ತೊಗರಿ ಬೆಳೆಗೆ ಬೆಂಬಲ ಬೆಲೆ ನೀಡಿ ಖರೀದಿಗೆ ಮಿತಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ತೊಗರಿಗೆ ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆ ಎಷ್ಟು;	ಹೌದು ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ತೀರ್ಮಾನದಂತೆ ಪ್ರತಿ ರೈತರಿಂದ ಗರಿಷ್ಠ 10 ಕ್ವಿಂಟಾಲ್ ತೊಗರಿ ಖರೀದಿಸಲಾಗುತ್ತಿದೆ. 2019-20ನೇ ಸಾಲಿಗೆ ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಉತ್ಪನ್ನ ಪ್ರತಿ ಕ್ವಿಂಟಾಲಿಗೆ ರೂ.5,800/- ಬೆಂಬಲ ಬೆಲೆಯನ್ನು ಘೋಷಿಸಿರುತ್ತದೆ. ಇದರ ಜೊತೆಗೆ ರಾಜ್ಯ ಸರ್ಕಾರದ ವತಿಯಿಂದ ಪ್ರೋತ್ಸಾಹಧನ ಪ್ರತಿ ಕ್ವಿಂಟಾಲ್‌ಗೆ ರೂ.300/- ರಂತೆ ನಿಗಧಿಪಡಿಸಿ ಒಟ್ಟಾರೆ ರೂ.6,100/- ರಂತೆ ಪ್ರತಿ ಕ್ವಿಂಟಾಲ್ ತೊಗರಿ ಖರೀದಿಸಲಾಗುತ್ತಿದೆ.
ಆ	ಪಹಣಿಯಲ್ಲಿ ನಮೂದಾಗಿರುವ ಬೆಳೆಗೂ ಮಾರಾಟ ಮಾಡಲು ರೈತರು ತಂದಿರುವ ಬೆಳೆಗಳು ಬೇರೆ ಬೇರೆ ಇವೆ ಎನ್ನುವ ಕಾರಣ ನೀಡಿ ತೊಗರಿ ಖರೀದಿಸಲು ನಿರಾಕರಿಸುತ್ತಿರುವುದರಿಂದ ರೈತರು ಮತ್ತೆ ಸಾಲಗಾರರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ
ಇ	ಬರಗಾಲ ಪ್ರದೇಶದ ರೈತರು ಬೆಳೆದ ಯಾವುದೇ ಬೆಳೆಯನ್ನು ಪಹಣಿಯಲ್ಲಿ ಬೆಳೆಯ ಮಾಹಿತಿ ಇರಲಿ, ಇಲ್ಲದಿರಲಿ ಕೂಡಲೇ ಬೆಂಬಲ ಬೆಲೆ ನೀಡಿ ಖರೀದಿಸಲು ಸರ್ಕಾರ ಕೈಗೊಂಡ ಕ್ರಮವೇನು;	2019-20ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ರೈತರ ನೋಂದಣಿಯನ್ನು ಎನ್.ಐ.ಸಿ. (ನ್ಯಾಷನಲ್ ಇನ್‌ಫಾರ್‌ಮೆಟಿಕ್ ಸೆಂಟರ್) ಎಫ್.ಸಿ.ಎಸ್. (ಫುಡ್ & ಸಿವಿಲ್ ಸಪ್ಲೈ) ತಂತ್ರಾಂಶದ ಮೂಲಕ ಮಾಡಲಾಗುತ್ತಿದೆ. ಒಂದು ವೇಳೆ ಬೆಳೆ ದರ್ಶಕದಲ್ಲಿ ರೈತರು ಬೆಳೆದಿರುವ ತೊಗರಿ ಬೆಳೆ ನಮೂದಾಗಿರದ ಸಂದರ್ಭದಲ್ಲಿ ಸದರಿ ರೈತರು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿರುತ್ತದೆ. ಇಂತಹ ಆಕ್ಷೇಪಣೆಗಳು ಬಂದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ದೃಢೀಕರಿಸಿದ ನಂತರ ರೈತರ ನೋಂದಣಿಯನ್ನು ಮಾಡಿಕೊಳ್ಳಲಾಗುತ್ತದೆ. ಆದಕಾರಣ, ನೈಜ ಫಲಾನುಭವಿಗಳಿಗೆ ಸರ್ಕಾರದ ಯೋಜನೆಯ ಲಾಭ ದೊರೆಯುತ್ತಿದೆ.

...2

ಈ	ರೈತರು ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ದೊರೆತಿಲ್ಲವೆಂಬ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; ಬೆಳೆದ ಬೆಳೆಯನ್ನು ಸರ್ಕಾರ ಖರೀದಿಸದೇ ಇರುವುದರಿಂದ ಕೃಷಿಗಾಗಿ ಮಾಡಿದ ಸಾಲವನ್ನು ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು;	ಅಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಉ	ತೊಗರಿಯನ್ನು ಬೆಂಬಲ ಬೆಲೆ ನೀಡಿ ಖರೀದಿಸುವ ಮಿತಿಯನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಕೇಂದ್ರ ಸರ್ಕಾರವು ಖರೀದಿಗೆ ಅನುಮತಿ ನೀಡಿರುವ 1,82,875 ಮೆಟ್ರಿಕ್ ಟನ್ ಪ್ರಮಾಣಕ್ಕನುಗುಣವಾಗಿ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ತೀರ್ಮಾನದಂತೆ ಪ್ರತಿ ರೈತರಿಂದ ಗರಿಷ್ಠ 10 ಕ್ವಿಂಟಾಲ್ ತೊಗರಿ ಖರೀದಿಸಲಾಗುತ್ತಿದೆ. ದಿನಾಂಕ:25.02.2020ರ ಅಂತ್ಯಕ್ಕೆ ರೈತ ನೋಂದಣಿ ಕಾರ್ಯ ಮುಕ್ತಾಯಗೊಂಡಿದ್ದು, ಒಟ್ಟಾರೆ 3,17,963 ರೈತರು ನೋಂದಣಿಯಾಗಿರುತ್ತಾರೆ. ಕೇಂದ್ರ ಸರ್ಕಾರವು ಗರಿಷ್ಠ ಖರೀದಿ ಪ್ರಮಾಣವನ್ನು 7.50 ಲಕ್ಷ ಮೆಟ್ರಿಕ್ ಟನ್‌ಗೆ ಹೆಚ್ಚಿಸಿ ತೊಗರಿಯನ್ನು ಖರೀದಿಸಲು ಅನುಮತಿ ನೀಡುವಂತೆ ಸನ್ಮಾನ್ಯ ಮುಖ್ಯ ಮಂತ್ರಿಗಳಿಂದ ಪತ್ರ ಮುಖೇನ ಕೇಂದ್ರ ಸರ್ಕಾರವನ್ನು ಕೋರಲಾಗಿತ್ತು. ರಾಜ್ಯ ಸರ್ಕಾರದ ಮನವಿ ಮೇರೆಗೆ ಗರಿಷ್ಠ ಪ್ರಮಾಣವನ್ನು ಕೇಂದ್ರ ಸರ್ಕಾರವು 2,27,500 ಮೆಟ್ರಿಕ್ ಟನ್‌ಗೆ ಹೆಚ್ಚಿಸಿ ಅನುಮತಿಸಿರುತ್ತದೆ. ಮುಂದುವರೆದು, ತೊಗರಿ ಖರೀದಿಸಲು Price Stabilization Fund (ಬಫರ್ ಸ್ಟಾಕ್) ಯೋಜನೆಯಡಿಯಲ್ಲಿ 3.58 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗಾಗಿ ಅನುಮತಿ ನೀಡಲು ಮತ್ತು ಈ ಯೋಜನೆಯಡಿ ಪಾವತಿಸಬೇಕಾದ ಮಾರುಕಟ್ಟೆ ಶುಲ್ಕಕ್ಕೆ ವಿನಾಯಿತಿ ನೀಡುವುದಾಗಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಪತ್ರ ಸಂಖ್ಯೆ:ಪಿಎಸ್: 02001/1/2020–ಪಿಎಂಎಸ್ ಪಾರ್ಟ1 ದಿ:12/03/2020 ಪತ್ರದಲ್ಲಿ ಒಂದು ಲಕ್ಷ ಮೆ.ಟನ್ ಹೆಚ್ಚುವರಿ ತೊಗರಿ ಖರೀದಿಗೆ ಅನುಮೋದನೆ ನೀಡಿರುತ್ತದೆ.

ಸಂಖ್ಯೆ: ಸಇ 145 ಎಂಆರ್‌ಇ 2020

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು